**<u>ಕರ್ನಾಟಕ ವಿಧಾನ ಪರಿಷತ್ತು</u>**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2422 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್ ಗೋಪಿನಾಥ್ |
| ಉತ್ತರಿಸುವ ದಿನಾಂಕ | : | 27.03.2026 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬೆಂಗಳೂರು ನಗರ ಜಿಲ್ಲೆಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ಬರುವ ಒಟ್ಟು ಹಾಸ್ಟೆಲ್‌ಗಳು ಎಷ್ಟು; ಅವುಗಳಲ್ಲಿ ಬಾಲಕ ಮತ್ತು ಬಾಲಕಿಯರ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)</td><td>ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಬೆಂಗಳೂರು ನಗರ ಜಿಲ್ಲೆಯಲ್ಲಿ ಒಟ್ಟು 60 ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದ್ದು, ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳ ವಿವರ ಕೆಳಕಂಡಂತಿದೆ.
<table>
<tr><th>ಕ್ರ ಸಂ</th><th>ವಿವರ</th><th>ಬಾಲಕ</th><th>ಬಾಲಕಿ</th><th>ಒಟ್ಟು</th></tr>
<tr><td>01</td><td>ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು</td><td>10</td><td>3</td><td>13</td></tr>
<tr><td>02</td><td>ಸರ್ಕಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು</td><td>24</td><td>23</td><td>47</td></tr>
<tr><td></td><td>ಒಟ್ಟು :</td><td>34</td><td>26</td><td>60</td></tr>
</table>
</td></tr>
<tr><td>ಆ)</td><td>ಹಾಸ್ಟೆಲ್‌ಗಳ ನಿರ್ವಹಣೆ ಹೇಗೆ ನಡೆಯುತ್ತದೆ; ನಿರ್ವಹಣೆ ನಡೆಸಲು ಇರುವ ಮಾನದಂಡಗಳಾವುವು;</td><td>ಇಲಾಖೆಯ ವಿದ್ಯಾರ್ಥಿನಿಲಯಗಳ ನಿರ್ವಹಣೆಗೆ ಸಂಬಂಧಿಸಿದಂತೆ ತಾಲ್ಲೂಕು ಪಂಚಾಯತ್ ಲೆಕ್ಕಶೀರ್ಷಿಕೆ:2225-00-101-0-61 ಹಾಗೂ ಜಿಲ್ಲಾಪಂಚಾಯತ್ ಲೆಕ್ಕಶೀರ್ಷಿಕೆ :2225-00-101-0-29 ರಡಿ ವಾರ್ಷಿಕ ನಿಗಧಿಗೊಳಿಸುವ ಅನುದಾನದಡಿ ನಿರ್ವಹಣೆ ಮಾಡಲಾಗುತ್ತಿದೆ.<br><br>ಇಲಾಖೆಯ ವಿದ್ಯಾರ್ಥಿನಿಲಯಗಳ ನಿರ್ವಹಣೆಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ:ಸಕಇ 190 ಪಕವಿ 2022, ದಿನಾಂಕ: 15-07-2022 ರಂದು ಹೊರಡಿಸಿರುವ ಮಾರ್ಗಸೂಚಿಗಳು ಹಾಗೂ ಆದೇಶಗಳನ್ವಯ ನಿರ್ವಹಣೆ ಮಾಡಲಾಗುತ್ತಿದೆ. ಮುಂದುವರೆದು, ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರು ನಿರ್ವಹಿಸಬೇಕಾಗಿರುವ ವಹಿಗಳು ಹಾಗೂ ಕೈಗೊಳ್ಳಬೇಕಾದ ಕ್ರಮಗಳ ಕುರಿತು ವಿದ್ಯಾರ್ಥಿನಿಲಯ ನಿರ್ವಹಣೆ ಕೈಪಿಡಿ ಹೊರಡಿಸಿ ನಿಲಯಗಳ ಸಮರ್ಪಕ ನಿರ್ವಹಣೆ ಕುರಿತಂತೆ ನಿರ್ದೇಶನ ನೀಡಲಾಗಿರುತ್ತದೆ.</td></tr>
</table>

| | | |
|---|---|---|
| ಇ) | ಇರುವಂತಹ ಹಾಸ್ಟೆಲ್‌ಗಳಲ್ಲಿ ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಸ್ಟೆಲ್ ಗಳೆಷ್ಟು; ಬಾಡಿಗೆ ಕಟ್ಟಡದಲ್ಲಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; | ಬೆಂಗಳೂರು ನಗರ ಜಿಲ್ಲೆಯಲ್ಲಿ ಇಲಾಖೆಯ ವತಿಯಿಂದ ನಿರ್ವಹಿಸಲಾಗುತ್ತಿರುವ 60 ವಿದ್ಯಾರ್ಥಿನಿಲಯಗಳ ಪೈಕಿ 53 ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳಲ್ಲಿ ಮತ್ತು 07 ವಿದ್ಯಾರ್ಥಿ ನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸಲಾಗುತ್ತಿದೆ. |
| ಈ) | ಪ್ರಸ್ತುತ ಬಾಡಿಗೆ ಕಟ್ಟಡಗಳಲ್ಲಿ ನಿರ್ವಹಣೆಯಾಗುತ್ತಿರುವ ಹಾಸ್ಟೆಲ್‌ಗಳಿಗೆ ಯಾವ ಕಾಲಮಿತಿಯೊಳಗೆ ಸ್ವಂತ ಕಟ್ಟಡ ಮಂಜೂರು ಮಾಡಿ ನಿರ್ಮಾಣ ಮಾಡಲಾಗುತ್ತದೆ? (ವಿವರ ನೀಡುವುದು) | ಬೆಂಗಳೂರು ನಗರ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಸುತ್ತಿರುವ 60 ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ವಿದ್ಯಾರ್ಥಿ ನಿಲಯಗಳ ಪೈಕಿ 53 ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು, 07 ವಿದ್ಯಾರ್ಥಿ ನಿಲಯ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುತ್ತವೆ. ಈ ಪೈಕಿ 06 ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಈಗಾಗಲೇ ಮಂಜೂರಾತಿ ನೀಡಲಾಗಿರುತ್ತದೆ. ಉಳಿದ 01 ವಿದ್ಯಾರ್ಥಿ ನಿಲಯಕ್ಕೆ ನಿವೇಶನ ಲಭ್ಯವಿದ್ದು, ಅನುದಾನದ ಲಭ್ಯತೆಯನ್ನಾಧರಿಸಿ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲು ಕ್ರಮವಹಿಸಲಾಗುವುದು. |

**ಸಂಖ್ಯೆ:ಸಕಇ 388 ಪಕವಿ 2026**

**(ಡಾ. ಹೆಚ್.ಸಿ. ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**